ವಿಷಯ: ಬೆಂಗಳೂರು ನಗರದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ಹಳದಿ ಕಾರ್ಡ್ ವಿತರಣೆ.

958 (1622)

ಶ್ರೀಮತಿ ಡಿ.ಜಿ.ಹೇಮಾವತಿ (ಶಾಂತಿನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ಹಳದಿಕಾರ್ಡ್‌ಗಳನ್ನು ವಿತರಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಬೆಂಗಳೂರು ನಗರದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಷ್ಟು ಜನರಿಗೆ ಹಳದಿಕಾರ್ಡ್‌ಗಳನ್ನು ವಿತರಿಸಲಾಗಿದೆ?

ಇ) ಅದರಲ್ಲಿ ಶಾಂತಿನಗರ ವಿಧಾನಸಭಾ ಕ್ಷೇತ್ರದ ಎಷ್ಟು ಜನರಿಗೆ ಹಂಚಲಾಗಿದೆ?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಇಲ್ಲ. ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ಗ್ರಾಮಾಂತರ ಪ್ರದೇಶದಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ಉತ್ತಮ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲು ಹಳದಿ ಕಾರ್ಡ್ ಯೋಜನೆಯನ್ನು ರೂಪಿಸಿದ್ದು ಕಾರ್ಯೋನ್ನತಗೊಳ್ಳುತ್ತಿದೆ. ಬೆಂಗಳೂರು ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ಈ ಹಳದಿ ಕಾರ್ಡ್ ಯೋಜನೆಯು ಅನ್ವಯಿಸುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ವಿಷಯ: ಉಳ್ಳಾಲ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿನ ಯೋಜನೆ.

959 (14 10)

ಶ್ರೀ ಕೆ.ಜಯರಾಮಶೆಟ್ಟಿ (ಉಳ್ಳಾಲ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ವಿಶ್ವಬ್ಯಾಂಕ್ ಯೋಜನೆಯಡಿ ಕುಡಿಯುವ ನೀರಿಗಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು

(ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

ಆ) ಮೇಲಿನ ಯೋಜನೆಗಳ ಮಾನದಂಡ ಯಾವುದು?

ಇ) ಉಳ್ಳಾಲ ವಿಧಾನಸಭಾ ಕ್ಷೇತ್ರದಲ್ಲಿ 2 ಕಡೆ ಈ ಯೋಜನೆಯನ್ನು ಕೈಗೊಂಡು ವರ್ಷ ಕಳೆದರೂ ಇನ್ನೂ ಕಾರ್ಯಗತವಾಗದೆ ಇರಲು ಕಾರಣಗಳೇನು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಕೊಳಚೆ ನೀರು ಸರಬರಾಜು, ಕಿರು ನೀರು ಸರಬರಾಜು, ಕೈಪಂಪು, ಪರಿಸರ ನೈರ್ಮಲ್ಯ ಕಾರ್ಯಕ್ರಮಗಳು, ಆರೋಗ್ಯ ಶಿಕ್ಷಣ, ಸಮುದಾಯ ಭಾಗವಹಿಸುವಿಕೆ, ಇತ್ಯಾದಿ ಕಾರ್ಯಕ್ರಮಗಳನ್ನು ವಿಶ್ವಬ್ಯಾಂಕ್ ಯೋಜನೆಯಡಿ ಹಮ್ಮಿಕೊಳ್ಳಲಾಗಿದೆ. ಯೋಜನೆಯಲ್ಲಿ ಒಳಗೊಂಡಿರುವ ವಿಧಾನ ಸಭಾವಾರು ಗ್ರಾಮಗಳ ವಿವರಗಳನ್ನು ಅನುಬಂಧ 'ಅ'ನಲ್ಲಿ ಒದಗಿಸಲಾಗಿದೆ.

ಆ) ಸಾರ್ವಜನಿಕ ನಲ್ಲಿಯಿಂದ ಪ್ರತಿಯೊಬ್ಬರಿಗೂ ಪ್ರತಿದಿನ 40 ಲೀಟರ್ ಹಾಗೂ ವೈಯಕ್ತಿಕ ನಲ್ಲಿ ಸಂಪರ್ಕ ಪಡೆಯುವವರಿಗೆ ಪ್ರತಿದಿನ ತಲಾ 70 ಲೀಟರ್ ಒದಗಿಸುವಂತೆ ಯೋಜನೆಯನ್ನು ರೂಪಿಸಲಾಗಿದೆ.

ಇ) 2 ಗ್ರಾಮಗಳ ಪೈಕಿ ಬೆಳ್ಮ ಗ್ರಾಮದಲ್ಲಿ ಕಾಮಗಾರಿಗಳು ಮುಗಿದಿದ್ದು ಗ್ರಾಮದ ಜನರು ನೀರನ್ನು ಉಪಯೋಗಿಸುತ್ತಿದ್ದಾರೆ. ಪಾವೂರು ಗ್ರಾಮದಲ್ಲಿ ಮೊದಲು ಕೊರೆದ ಕೊಳವೆ ಬಾವಿ ನೀರು ಬತ್ತಿ ಹೋಗಿರುವುದರಿಂದ ಮತ್ತೊಂದು ಕೊಳವೆ ಬಾವಿಯನ್ನು ಕೊರೆಯಲಾಗಿದ್ದು ಕೈಪಂಪನ್ನು ಅಳವಡಿಸಬೇಕಾಗಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1410

ಅನುಬಂಧ - ಅ

ಕ್ರ.ಸಂ.	ವಿಧಾನಸಭಾ ಕ್ಷೇತ್ರ	ಗ್ರಾಮಗಳ ಸಂಖ್ಯೆ		
		ಮೊದಲ ಹಂತ	ಎರಡನೆ ಹಂತ	ಒಟ್ಟು
1.	ಸೂಳ್ಯ	2	16	18
2.	ಪುತ್ತೂರು	2	6	8
3.	ವಿಠಲ	2	5	7
4.	ಬಂಟ್ವಾಳ	2	12	14
5.	ಉಳ್ಳಾಲ	2	-	2
6.	ಬೆಳ್ತಂಗಡಿ	1	4	5
7.	ಸೂರತ್‌ಕಲ್	-	4	4
8.	ಮೂಡಬಿದರೆ	-	4	4
	ಒಟ್ಟು	11	51	62